ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಮೀನುಗಾರಿಕೆ ಇಲಾಖೆಯಲ್ಲಿರುವ ಯೋಜನೆಗಳ ಬಗ್ಗೆ

ಶ್ರೀ ಕಾಂತರಾಜು(ಬಿಎಂಎಲ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

1043 (1280) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಮೀನುಗಾರಿಕೆ ಇಲಾಖೆಯಲ್ಲಿ ಹಾಲಿ ಜಾರಿಯಲ್ಲಿರುವ ಯೋಜನೆಗಳಾವುವು; (ಮಾಹಿತಿ ನೀಡುವುದು)

(ಆ) 2019-20ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯಲ್ಲಿ ಮೂಲಭೂತ ಸೌಕರ್ಯ ನಿರ್ಮಾಣಕ್ಕಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; ಖರ್ಚಾಗಿರುವುದು ಎಷ್ಟು; ಮತ್ತು ಉಳಿದಿರುವುದು ಎಷ್ಟು;

(ಇ) ಕಳೆದ 3 ವರ್ಷಗಳಲ್ಲಿ ತುಮಕೂರು ಜಿಲ್ಲೆಗೆ ಮೀನುಗಾರಿಕೆ ಇಲಾಖೆಯಲ್ಲಿ ಮೂಲಭೂತ ಸೌಕರ್ಯ ನಿರ್ಮಾಣಕ್ಕಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; (ತಾಲ್ಲೂಕುವಾರು, ಕಾಮಗಾರಿವಾರು ವಿವರವಾದ ಮಾಹಿತಿ ನೀಡುವುದು)

(ಈ) ಮತ್ಸ್ಯಾಶ್ರಯ ಯೋಜನೆಯಡಿ ಒಂದು ಮನೆಯ ಘಟಕ ವೆಚ್ಚ ಎಷ್ಟು; ತುರುವೇಕೆರೆ ಮತ್ತು ಗುಬ್ಬಿ ತಾಲ್ಲೂಕುಗಳಿಗೆ ಕಳೆದ 3 ವರ್ಷಗಳಿಂದ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ; (ಗ್ರಾಮ ಪಂಚಾಯ್ತಿವಾರು ವಿವರವಾದ ಮಾಹಿತಿ ನೀಡುವುದು)

(ಉ) ಮೀನುಗಾರಿಕೆ ಇಲಾಖೆಯಡಿಯಲ್ಲಿ ಎಷ್ಟು ಮೀನುಗಾರಿಕಾ ಸಹಕಾರ ಸಂಘಗಳಿವೆ; ಅವುಗಳ ವಿಧಗಳಾವುವು; ಇವುಗಳಿಗೆ ಕಳೆದ ಸಾಲಿನಲ್ಲಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ? (ವಿಳಾಸದೊಂದಿಗೆ ಮಾಹಿತಿ ನೀಡುವುದು)